812 (949) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006–07ನೇ ಸಾಲಿನಲ್ಲಿ ಸಂತೇಮರಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು;

ಶ್ರೀ ಬಿ.ಎಸ್.ಹೊರಟ್ಟಿ: (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಪ್ರಸ್ತಾವನೆಯು ಸರ್ಕಾರದ ಮುಂದಿದ್ದು, ಸ್ಥಳೀಯ ಶೈಕ್ಷಣಿಕ ಅಗತ್ಯತೆ ಹಾಗೂ ಆಯವ್ಯಯದ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅಗತ್ಯ ಕ್ರಮವಹಿಸಲಾಗುವುದು.

813 (1054) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

01. 2006–07ನೇ ಸಾಲಿನಲ್ಲಿ ಸರ್ಕಾರಿ ಹೊಸ ಪ್ರಥಮ ದರ್ಜೆ ಕಾಲೇಜು ಹಾಗೂ ಪ್ರೌಢಶಾಲೆಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ;

02. ಹಾಗಿದ್ದಲ್ಲಿ, ಎಷ್ಟು ಶಾಲೆಗಳನ್ನು ತೆರೆಯುವ ಉದ್ದೇಶವಿದೆ;

03. ಡಾಃ ನಂಜುಂಡಪ್ಪ ವರದಿಯನ್ನು ಆಯ್ಕೆ ಪ್ರಕ್ರಿಯೆಯನ್ನು ಅಳವಡಿಸಲಾಗುವುದೇ;

04. ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

05. ಈ ಉದ್ದೇಶಕ್ಕಾಗಿ ಸಂತೇಮರಳ್ಳಿ ಮೀಸಲು ವಿಧಾನಸಭಾ ಕ್ಷೇತ್ರವನ್ನು ಪರಿಗಣಿಸಲಾಗುವುದೇ?

ಶ್ರೀ ಬಿ. ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

01. ಹೌದು

02. 365 ಪ್ರೌಢಶಾಲೆಗಳು

03. ಸರ್ಕಾರದ ಪರಿಶೀಲನೆಯಲ್ಲಿದೆ.

04. ಮತ್ತು 05. ಪ್ರಸ್ತಾವನೆ ಬಂದಿದ್ದು, ಶೈಕ್ಷಣಿಕ ಅಗತ್ಯತೆ ಹಾಗೂ ಆಯವ್ಯಯದ ಲಭ್ಯತೆಗನುಗುಣವಾಗಿ 2006–07ನೇ ಸಾಲಿನಲ್ಲಿ ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.